# ಕರ್ನಾಟಕ ಸರ್ಕಾರ

**ಸಂಖ್ಯೆ: ಕಾಇ 313 ಎಲ್ ಡಬ್ಲ್ಯೂಎ 2023** **ಕರ್ನಾಟಕ ಸರ್ಕಾರದ ಸಚಿವಾಲಯ,**
**ವಿಕಾಸಸೌಧ,**
**ಬೆಂಗಳೂರು, ದಿನಾಂಕ: 04.09.2023**

## ಸೇರ್ಪಡೆ

**ಕರ್ನಾಟಕ ಸರ್ಕಾರವು ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015 ದಿನಾಂಕ: 05.08.2016 ರ ಮೂಲಕ "ಗ್ರಂಥಪಾಲಕರು / ಗ್ರಂಥಾಲಯ ಮೇಲ್ವಿಚಾರಕ" ಹುದ್ದೆಗಳನ್ನು ಸೇರ್ಪಡೆಗೊಳಿಸಿ ``ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು ಅನುಸೂಚಿತ ಉದ್ದಿಮೆ"ಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿದ್ದು, ಅಧಿಸೂಚನೆ ಹೊರಡಿಸುವ ಪೂರ್ವದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಭಿಪ್ರಾಯ ಪಡೆಯದ ಕಾರಣ ಹಾಗೂ ಗ್ರಂಥಾಲಯ ಮೇಲ್ವಿಚಾರಕರು ಗೌರವ ಸಂಭಾವನೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿರುವ ಹಿನ್ನೆಲೆಯಲ್ಲಿ, "ಗ್ರಂಥಪಾಲಕರು / ಗ್ರಂಥಾಲಯ ಮೇಲ್ವಿಚಾರಕ" ಹುದ್ದೆಗಳಿಗೆ ಸಂಬಂಧಿಸಿದಂತೆ ಮಾತ್ರ ಅಧಿಸೂಚನೆಯನ್ನು ಹಿಂಪಡೆದು, ದಿನಾಂಕ: 04-09-2017 ರಂದು ಅಧಿಸೂಚನೆ ಹೊರಡಿಸಲಾಗಿತ್ತು.**

**ಕರ್ನಾಟಕ ರಾಜ್ಯ ಸರ್ಕಾರಿ ಗ್ರಾಮೀಣ ಗ್ರಂಥಾಲಯಗಳ ನೌಕರರ ಸಂಘ, ಶಿವಮೊಗ್ಗ, ಇವರು ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ರಿಟ್ ಅರ್ಜಿ ಸಂ. 22420/2017 ರಲ್ಲಿ ದಿನಾಂಕ: 21-4-2022 ರಂದು ಹೊರಡಿಸಿರುವ ಅಂತಿಮ ತೀರ್ಪಿನಲ್ಲಿ ಗೌರವಾನ್ವಿತ ನ್ಯಾಯಾಲಯವು ಈ ಕೆಳಕಂಡಂತೆ ನಿರ್ದೇಶಿಸಿರುತ್ತದೆ.**

***"The impugned order dated 22-4-2017 as well as the impugned notification dated 4-9-2017 are hereby set aside.***

**ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಲ್ಲಿ "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು" ಅನುಸೂಚಿತ ಉದ್ದಿಮೆಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ ಸರ್ಕಾರವು ಹೊರಡಿಸಿದ್ದ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015, ದಿನಾಂಕ: 05-08-2016 ರ ಕ್ರಮ ಸಂಖ್ಯೆ: 1 ಕ್ಕೆ "ಗ್ರಂಥಪಾಲಕರು / ಗ್ರಂಥಾಲಯ ಮೇಲ್ವಿಚಾರಕ" ಹುದ್ದೆಗಳನ್ನು ಸೇರ್ಪಡೆಗೊಳಿಸಲಾಗಿದೆ.**

| ಕ್ರ. ಸಂ | ಕೆಲಸದ ವರ್ಗಗಳು | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು | ರಾಜ್ಯದ ಎಲ್ಲಾ ನಗರಸಭೆಗಳು (ಗ್ರೇಡ್-1) | ರಾಜ್ಯದ ಎಲ್ಲಾ ನಗರಸಭೆಗಳು (ಗ್ರೇಡ್-2) ಹಾಗೂ ಪುರಸಭೆಗಳು | ರಾಜ್ಯದ ಎಲ್ಲಾ ಪಟ್ಟಣ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳು |
|---|---|---|---|---|---|
| | | | ಮಾಸಿಕ ದರಗಳು | | |
| 1 | ಗ್ರಂಥಪಾಲಕ/ ಗ್ರಂಥಾಲಯ ಮೇಲ್ವಿಚಾರಕರು | 14630.00 | 14,190.00 | 13,761.00 | 13,200.00 |

ಮುಂದುವರೆದು, ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 106 ಎಲ್ ಡಬ್ಲ್ಯೂಎ 2021 ದಿನಾಂಕ: 28.07.2022ರಲ್ಲಿ "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು" ಅನುಸೂಚಿತ ಉದ್ದಿಮೆಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ ಹೊರಡಿಸಿರುವ ಅಧಿಸೂಚನೆಯಲ್ಲಿಯೂ ಸಹ "ಗ್ರಂಥಪಾಲಕರು / ಗ್ರಂಥಾಲಯ ಮೇಲ್ವಿಚಾರಕ" ಹುದ್ದೆಗಳು ಕ್ರಮ ಸಂಖ್ಯೆ: 1 ರಲ್ಲಿಯೇ ಮುಂದುವರೆದಿರುತ್ತವೆ.

| ಕ್ರ. ಸಂ | ಕೆಲಸದ ವರ್ಗಗಳು | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು | ರಾಜ್ಯದ ಎಲ್ಲಾ ನಗರಸಭೆಗಳು (ಗ್ರೇಡ್-1) | ರಾಜ್ಯದ ಎಲ್ಲಾ ನಗರಸಭೆಗಳು (ಗ್ರೇಡ್-2) ಹಾಗೂ ಪುರಸಭೆಗಳು | ರಾಜ್ಯದ ಎಲ್ಲಾ ಪಟ್ಟಣ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳು |
|---|---|---|---|---|---|
| ಮಾಸಿಕ ದರಗಳು | | | | | |
| 1 | ಗ್ರಂಥಪಾಲಕ/ ಗ್ರಂಥಾಲಯ ಮೇಲ್ವಿಚಾರಕರು | 17955.00 | 17471.52 | 16999.62 | 16382.52 |

ಮೇಲಿನ ಸೇರ್ಪಡೆಯನ್ನು ಹೊರತುಪಡಿಸಿ, ದಿನಾಂಕ: 5-8-2016 ರಂದು ಹಾಗೂ 28-7-2022 ರಂದು ಹೊರಡಿಸಿರುವ ಅಧಿಸೂಚನೆಗಳ ವ್ಯತ್ಯಸ್ಥ ತುಟ್ಟಿಭತ್ಯೆಯ ಅಂಶದಲ್ಲಾಗಲೀ ಅಥವಾ ಷರತ್ತುಗಳಲ್ಲಾಗಲೀ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

4/9/2023
(ಎ. ಉಮಾದೇವಿ)
ಪೀಠಾಧಿಕಾರಿ-2,
ಕಾರ್ಮಿಕ ಇಲಾಖೆ (ಕನಿಷ್ಠ ವೇತನ)

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಈ ಅಧಿಸೂಚನೆಯನ್ನು ಇ - ರಾಜ್ಯಪತ್ರ (E-Gazzette) ದಲ್ಲಿ ಪ್ರಕಟಿಸಲು ಕೋರಲಾಗಿದೆ.

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ).
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ).
4. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಇನ್ ಫೆಂಟ್ರಿ ರಸ್ತೆ, ಬೆಂಗಳೂರು
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಆಯುಕ್ತರ ಕಛೇರಿ, ಕಾರ್ಮಿಕ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ)
7. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿ.

ಪ್ರತಿಗಳು:

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ
3. ಉಪ ನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ.) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
4. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ